ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE: 5/2/2020

# ನಿಂಬಾಳ್ಕರ್ ಸೇರಿ 9 ಮಂದಿ ವಿರುದ್ಧ ಎಫ್‌ಐಆರ್

ಸಂ.ಕ.ಸಮಾಚಾರ,ಬೆಂಗಳೂರು: 5-2-20

ಐಎಂಎ ಬಹುಕೋಟಿ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಹಿರಿಯ ಐಪಿಎಸ್ ಅಧಿಕಾರಿಗಳಾದ ಹೇಮಂತ್ ನಿಂಬಾಳ್ಕರ್ ,ಅಜಯ್ ಹಿಲೋರಿ ಸೇರಿದಂತೆ ಒಂಬತ್ತು ಮಂದಿ ಪೊಲೀಸ್ ಅಧಿಕಾರಿಗಳ ವಿರುದ್ಧ ಸಿಬಿಐ ಎಫ್‌ಐಆರ್ ದಾಖಲಿಸಿದೆ.




ಈ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಹಿರಿಯ ಐಪಿ- ಎಸ್ ಅಧಿಕಾರಿಗಳನ್ನು ವಿಚಾರಣೆಗೊಳಪಡಿಸಲು ಅವಕಾಶ ನೀಡುವಂತೆ ಸಿಬಿಐ ರಾಜ್ಯ ಸರ್ಕಾರಕ್ಕೆ ಕೋರಿದ್ದ ಹಿನ್ನೆಲೆಯಲ್ಲಿ ಕಳೆದ ವಾರ ರಾಜ್ಯ ಸರ್ಕಾರ ವಿಚಾರಣೆಗೆ ಅನುಮತಿ ನೀಡಿ ಆದೇಶ ಹೊರಡಿಸಿತ್ತು.

ಈ ಹಿನ್ನೆಲೆಯಲ್ಲಿ ಸಿಬಿಐ ಅಧಿಕಾರಿಗಳು ಹಿರಿಯ ಐಪಿಎಸ್ ಅಧಿಕಾರಿಗಳು ಸೇರಿದಂತೆ ಒಂಬತ್ತು ಮಂದಿಯನ್ನು ಕಚೇರಿಗೆ ಕರೆಸಿ ವಿಚಾರಣೆಗೊಳಪಡಿಸಿದ್ದು ಈಗ ಅವರ ವಿರುದ್ಧ ಎಫ್‌ಐಆರ್ ದಾಖಲಿಸಿದೆ.

ಐಪಿಎಸ್ ಅಧಿಕಾರಿಗಳಾದ ಹೇಮಂತ್ ನಿಂಬಾಳ್ಕರ್, ಅಜಯ್ ಹಿಲೋರಿ ಹಾಗೂ ಅಂದಿನ ಕಮರ್ಷಿಯಲ್ ಠಾಣೆ ಇನ್‌ಸ್ಪೆಕ್ಟರ್ ಎಂ.ರಮೇಶ್, ಸಬ್ ಇನ್‌ಸ್ಪೆಕ್ಟರ್ ಗೌರಿಶಂಕರ್, ಸಿಐಡಿ ಡಿವೈಎಸ್ಪಿ ಶ್ರೀಧರ್ ಮೇಲೆ ಸೆಕ್ಷನ್ 120 ಬಿ ಅಡಿ ಬೆಂಗಳೂರು ಸಿಬಿಐ ಕಚೇರಿಯಲ್ಲಿ ಎಫ್‌ಐಆರ್ ದಾಖಲು ಮಾಡಲಾಗಿದೆ.

2016ರಲ್ಲಿ ಐಎಂಎ ಕಂಪನಿ ಬಗ್ಗೆ ನಿಗಾ ವಹಿಸಿ ತನಿಖೆ ನಡೆಸುವಂತೆ ಆರ್‌ಬಿಐ ಪತ್ರ ಬರೆದಿತ್ತು. ಅದರಂತೆ ಅಂದು ಡಿಸಿಪಿಯಾಗಿದ್ದ ಅಜಯ್ ಹಿಲೋರಿ ಮೂಲಕ ಕಮರ್ಷಿಯಲ್ ಸ್ಟ್ರೀಟ್ ಇನ್‌ಸ್ಪೆಕ್ಟರ್ ರಮೇಶ್‌ಗೆ ಪತ್ರ ಕೂಡ ರವಾನಿಸಲಾಗಿತ್ತು. ತನಿಖೆ ನಡೆಸಿ ಐಎಂಎ ಕಂಪನಿ ಬಗ್ಗೆ ವರದಿ ನೀಡಲು ಸೂಚನೆ ನೀಡಲಾಗಿತ್ತು. ಆದರೆ ಈ ವೇಳೆ ಐಎಂಎ ಕಂಪನಿ ಬಗ್ಗೆ ಯಾವುದೇ ಕ್ರಮ ಜರುಗಿಸದೇ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ ಆರೋಪ ಕೇಳಿಬಂದಿದೆ. ಅಂದಿನ ಇನ್‌ಸ್ಪೆಕ್ಟರ್ ಎಂ ರಮೇಶ್ ಹಾಗೂ ಅಂದಿನ ಡಿಸಿಪಿ ಅಜಯ್ ಹಿಲೋರಿ ನಿರ್ಲಕ್ಷ್ಯ ಮಾಡಿರುವ ಆರೋಪ ಕೇಳಿಬಂದ ಕಾರಣ ಅವರ ವಿರುದ್ಧ ಸಿಬಿಐ ಎಫ್‌ಐಆರ್ ದಾಖಲಿಸಿದೆ.